(158)

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಗೋವಿಂದರಾಜು ರವರ ನಿಯಮ-72 ರ ಗಮನ ಸೆಳೆಯುವ ಸೂಚನೆಗೆ ಉತ್ತರ ನೀಡುವ ಕುರಿತು.**

**ಸೂಚನೆ:**

ಪರಿಶಿಷ್ಟ ಜಾತಿಯ ವಧು ಅಥವಾ ವರರ ಅಂತರ್ಜಾತಿ ವಿವಾಹಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕರ್ನಾಟಕ ಅಂತರ್ಜಾತಿ ವಿವಾಹ ಯೋಜನೆಯಡಿಯಲ್ಲಿ ಅವರಿಗೆ ಪ್ರೋತ್ಸಾಹಧನ ನೀಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ಆಡಳಿತಾತ್ಮಕ ಅಡೆ ತಡೆ ಮತ್ತು ಅಧಿಕಾರಿಗಳ ಜಡತ್ವದಿಂದ ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಮುಂದುವರೆಸುವಲ್ಲಿ ಸರ್ಕಾರ ವಿಫಲವಾಗಿದೆ. 2025-26ರ ಆರ್ಥಿಕ ವರ್ಷದಲ್ಲಿ ಕರ್ನಾಟಕ ಅಂತರ್ಜಾತಿ ವಿವಾಹ ಯೋಜನೆಯಡಿಯಲ್ಲಿ ಪ್ರೋತ್ಸಾಹ ಧನಕ್ಕಾಗಿ 5210 ಅರ್ಜಿಗಳು ಸಲ್ಲಿಕೆಯಾಗಿದ್ದು, ಶೇ 63 ಕಿಂತ ಹೆಚ್ಚು ಅಂದರೆ 3319 ಅರ್ಜಿದಾರರಿಗೆ ಇನ್ನು ಮೊದಲ ಕಂತಿನ ಹಣ ಪಾವತಿಯಾಗಿಲ್ಲ, ಕೇವಲ 27 ಫಲಾನುಭವಿಗಳಿಗೆ ಮಾತ್ರ ಪೂರ್ಣ ಪ್ರಮಾಣದ ಸಹಾಯಧನವನ್ನು ಮಂಜೂರು ಮಾಡಲಾಗಿದೆ, 2286 ಫಲಾನುಭವಿಗಳಿಗೆ ಮೊದಲ ಕಂತಿನ ಹಣ ಪಾವತಿಗೆ ಅನುಮೋದನೆ ನೀಡಿದ್ದು, ಉಳಿದ 1492 ಅರ್ಜಿಗಳಿಗೆ ಇಲಾಖೆ ಅನುಮೋದನೆ ನೀಡದೆ, ಬಾಕಿ ಉಳಿಸಿಕೊಂಡಿರುವುದರ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಇಲಾಖೆಯ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ಪರಿಶಿಷ್ಟ ಜಾತಿಯವರು ಇತರೆ ಜಾತಿಯ ಯುವತಿಯನ್ನು ವಿವಾಹವಾಗಿದ್ದಲ್ಲಿ ರೂ.2.50 ಲಕ್ಷಗಳನ್ನು ಮತ್ತು ಪರಿಶಿಷ್ಟ ಜಾತಿ ವಧು ಇತರೆ ಜಾತಿಯವರನ್ನು ವಿವಾಹವಾದಲ್ಲಿ ರೂ.3.00 ಲಕ್ಷಗಳ ಪ್ರೋತ್ಸಾಹ ಧನ ನೀಡಲಾಗುತ್ತಿದೆ. ಅರ್ಜಿಯನ್ನು On-Line ಮುಖಾಂತರ ಸ್ವೀಕರಿಸಿ, ಅರ್ಜಿಗಳನ್ನು ತಾಲ್ಲೂಕು ಮಟ್ಟದಲ್ಲಿ ಸ್ಥಳ ಮಹಜರು ಮಾಡಿ ಅರ್ಹ ಅರ್ಜಿಗಳಿಗೆ, ಅರ್ಜಿ ಸಲ್ಲಿಕೆಯ ದಿನಾಂಕದ ಜೇಷ್ಠತೆಯ ಆಧಾರದ ಮೇಲೆ ಪ್ರೋತ್ಸಾಹ ಧನವನ್ನು ಮಂಜೂರು ಮಾಡಲಾಗಿರುತ್ತದೆ.

2025-26ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ಯೋಜನೆಯಡಿ ಅಂತರ್ಜಾತಿ ವಿವಾಹ ಪ್ರೋತ್ಸಾಹಧನ ಕಾರ್ಯಕ್ರಮಕ್ಕೆ ರೂ.4556.50 ಲಕ್ಷಗಳು ಹಾಗೂ ಕೇಂದ್ರ ಪುರಸ್ಕೃತ ಯೋಜನೆಯಡಿ ಒಟ್ಟು ರೂ.800.00 ಲಕ್ಷಗಳು ಅದರಲ್ಲಿ ಕೇಂದ್ರದ ಪಾಲು ರೂ.400.00 ಲಕ್ಷಗಳು ಮತ್ತು ರಾಜ್ಯದ ಪಾಲು ರೂ.400.00 ಲಕ್ಷಗಳು ಸೇರಿ ಒಟ್ಟಾರೆಯಾಗಿ ರೂ. 5356.50 ಲಕ್ಷಗಳು ಬಿಡುಗಡೆಯಾಗಿರುತ್ತದೆ.

ಸದರಿ ಅನುದಾನದಲ್ಲಿ ಹಿಂದಿನ ಸಾಲುಗಳಲ್ಲಿ ಬಾಕಿಯಿದ್ದ ಅರ್ಜಿಗಳಿಗೆ ಜೇಷ್ಠತೆ ಆಧಾರದ ಮೇಲೆ ಮಂಜೂರು ಮಾಡಲಾಗುತ್ತಿದ್ದು, ಜನವರಿ-2026 ರಂದು ಈ ಆರ್ಥಿಕ

ವರ್ಷದ ಅನುದಾನ ಸಂಪೂರ್ಣವಾಗಿ ಬಿಡುಗಡೆಯಾಗಿದ್ದು, ಪ್ರಸ್ತುತ 3383 ಬಾಕಿ ಅರ್ಜಿಗಳಿಗೆ ಪ್ರೋತ್ಸಾಹಧನ ನೀಡುವ ಸಂಬಂಧ ಜೇಷ್ಠತೆ ಆಧಾರದ ಮೇಲೆ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ:ಸಕಇ 290 ಪಕವಿ 2026

**(ಡಾ. ಹೆಚ್.ಸಿ. ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು